# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಟಿ.ಬಿ.ಮೂಗಾನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗುಡ್ಡಗುಡ್ಡಾಪುರ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-8826/2015/ARLO1, ದಿನಾಂಕ: 24.06.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 13.06.2017 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಜಗದೀಶ ಹನುಮಂತಪ್ಪ ಕೆರೋಡಿ, ಹುಲ್ಲತ್ತಿ ಗ್ರಾಮ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಶ್ರೀ ಟಿ.ಬಿ.ಮೂಗಾನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗುಡ್ಡಗುಡ್ಡಾಪುರ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ಕೆಳಗಿನಂತೆ ಆರೋಪಗಳನ್ನು ಮಾಡಿ ದೂರು ಸಲ್ಲಿಸಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರದಡಿ ತನಿಖೆ ಕೈಗೊಳ್ಳಲಾಗಿದೆ.

"ಹಾವೇರಿ ಜಿಲ್ಲೆ ರಾಣಿಬೆನ್ನೂರು ತಾಲ್ಲೂಕಿನ ಈ ಹಿಂದಿನ ಗ್ರಾಮ ಪಂಚಾಯತಿ ಗುಡ್ಡಾಪುರ ವ್ಯಾಪ್ತಿಗೆ ಸಂಬಂಧಪಟ್ಟ ಹುಲ್ಲತ್ತಿ ಗ್ರಾಮದ ವಡ್ಡರ ಓಣಿ ಹಾಗೂ ಎಸ್.ಸಿ. ಕಾಲನಿಯಲ್ಲಿ ನಿರ್ಮಿಸಲಾಗಿರುವ ಸಿಡಿ ನಿರ್ಮಾಣವನ್ನು 2014-15 ನೇ ಸಾಲಿನ 13 ನೇ ಹಣಕಾಸು ಆಯೋಗದಲ್ಲಿ ಅದರ ನಿರ್ಮಾಣಕ್ಕೆ ರೂ.65,000/- ಅಂದಾಜು ಪಟ್ಟಿಯೊಂದಿಗೆ ಪೂರ್ಣಗೊಂಡಿದ್ದು, ಆ ಕಾಮಗಾರಿ ಪೂರ್ಣಗೊಂಡು ಒಂದು ವರ್ಷ ಕಳೆದಿದ್ದು, ಆ ಸಿಡಿಯ ಮೇಲ್ಭಾಗದ ಕಾಂಕ್ರೀಟ್ ಕಿತ್ತು ಒಳಗಿರುವ ಕಬ್ಬಿಣದ ರಾಡ್‌ಗಳು ಮೇಲೆ ಬಂದಿದ್ದು, ಇದರಿಂದ ಸಂಸಾರಕ್ಕೆ ಅಡೆತಡೆಯಾಗಿದೆ. ಈ ಕಾಮಗಾರಿಯನ್ನು ರೂ.15000 ರಿಂದ ರೂ.20000 ಒಳಗೆ ನಿರ್ಮಿಸಬಹುದಾಗಿದ್ದು, ರೂ.60,000/- ಗಳ ಹಣ ಖರ್ಚು ಮಾಡಿ ಆ ಕಾಮಗಾರಿಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಹೇಳಿದ್ದಾರೆ."

ಕಡತ ಹಾಗೂ ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1) ರನ್ವಯ ಎದುರುದಾರರಾದ ಶ್ರೀ ಟಿ.ಬಿ.ಮೂಗಾನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗುಡ್ಡಗುಡ್ಡಾಪುರ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಶಿಸ್ತು ಕ್ರಮಕ್ಕೆ ಭಾದ್ಯರಾಗಿರುತ್ತಾರೆಂದು ಕಂಡು ಬಂದಿದ್ದರಿಂದ, ಸದರಿಯವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14ಎ ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಟಿ.ಬಿ.ಮೂಗಾನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗುಡ್ಡಗುಡ್ಡಾಪುರ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 558 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 17.07.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಟಿ.ಬಿ.ಮೂಗಾನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗುಡ್ಡಗುಡ್ಡಾಪುರ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 85 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5. ಕಾರ್ಯನಿರ್ವಾಹಕ ಅಧಿಕಾರಿ, ರಾಣಿಬೆನ್ನೂರು ತಾಲ್ಲೂಕು ಪಂಚಾಯತಿ, ರಾಣಿಬೆನ್ನೂರು, ಹಾವೇರಿ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಟಿ.ಬಿ.ಮೂಗಾನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗುಡ್ಡಗುಡ್ಡಾಪುರ ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ
7. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.